478(210) ಶ್ರೀ ಶಶಿಕಾಂತ್ ಅಕ್ಕಪ್ಪ ನಾಯಕ್ (ಹುಕ್ಕೇರಿ) ಮಾನ್ಯ ಸಕ್ಕರೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಕಬ್ಬು ಬೆಳೆಗಾರರಿಗೆ ಸರ್ಕಾರ ನೀಡಬೇಕಾಗಿರುವ ಬಾಕಿ ಹಣವೆಷ್ಟು?

ಆ) ಈ ಹಣ ಬಾಕಿ ಇರುವುದು ಎಂದಿನಿಂದ?

ಇ) ಬೆಳೆಗಾರರಿಗೆ ಹಣ ನೀಡದಿರಲು ಕಾರಣವೇನು?

ಈ) ಕಳೆದ 3 ವರ್ಷಗಳಿಂದ ಕಬ್ಬು ಬೆಳೆಗಾರರಿಗೆ ಬಾಕಿ ಹಣ ಪಾವತಿ ಮಾಡಲಾಗಿದೆಯೇ? ಪಾವತಿ ಮಾಡಲಾದ ಮೊತ್ತವೆಷ್ಟು?

ಉ) ಬಾಕಿ ಹಣ ಪಾವತಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಆಮೆರೇಗೌಡ .ಎಲ್.ಪಾಟೀಲ್ ಬಯ್ಯಪುರ (ಸಕ್ಕರೆ ಸಚಿವರು) :

ಅ) ಕಬ್ಬು ಬೆಳೆಗಾರರಿಗೆ ಸರ್ಕಾರದಿಂದ ನೀಡಬೇಕಾಗಿರುವ ಬಾಕಿ ಯಾವುದೂ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ಉ) ಉದ್ಭವಿಸುವುದಿಲ್ಲ.

479(211)ಶ್ರೀ ಶಶಿಕಾಂತ್ ಅಕ್ಕಪ್ಪ ನಾಯಕ್(ಹುಕ್ಕೇರಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ವಿದ್ಯಾರ್ಥಿಗಳಿಗೆ ನೀಡುತ್ತಿರುವ ವಿದ್ಯಾರ್ಥಿ ವೇತನ ಕುರಿತು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಸಮಾಜ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿಗಳಿಗೆ ನೀಡುತ್ತಿರುವ ವಿದ್ಯಾರ್ಥಿ ವೇತನದ ಮೊತ್ತವೆಷ್ಟು?

ಆ) ಕಳೆದ ಎಷ್ಟು ವರ್ಷಗಳಿಂದ ಈ ಮೊತ್ತವನ್ನು ನೀಡಲಾಗುತ್ತಿದೆ.

ಇ) ಪ್ರತಿ ವಿದ್ಯಾರ್ಥಿಗೆ ನೀಡುತ್ತಿರುವ ವಿದ್ಯಾರ್ಥಿವೇತನವನ್ನು ಯಾವ ವರ್ಷ ಪರಿಷ್ಕರಿಸಲಾಯಿತು, ನಂತರ ಹೆಚ್ಚಿಸದೆ ಇರಲು ಕಾರಣಗಳೇನು?

ಶ್ರೀ. ಡಾ॥ ವೈ.ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಈ ಕೆಳಗೆ ಸೂಚಿಸಿರುವಂತೆ ವಿದ್ಯಾರ್ಥಿಗಳಿಗೆ ವೇತನವನ್ನು ನೀಡಲಾಗುತ್ತಿದೆ.

1. ಸಮಾಜ ಕಲ್ಯಾಣ ಇಲಾಖೆ

ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿವಿಧ ರೀತಿಯ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನದ ಮೊತ್ತ ಹಾಗೂ ಈ ಮೊತ್ತವನ್ನು ನೀಡುತ್ತಿರುವ ವರ್ಷವಾರು ವಿವರಗಳನ್ನು ಅನುಬಂಧದಲ್ಲಿ ನಮೂದಿಸಿದೆ.

2. ಹಿಂದುಳಿದ ವರ್ಗಗಳ ಇಲಾಖೆ

ಹಿಂದುಳಿದ ವರ್ಗಗಳ ಇಲಾಖೆಯಿಂದ 5 ರಿಂದ 7ನೇ ತರಗತಿ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ. 75–00ಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ.

ಹಿಂದುಳಿದ ವರ್ಗಗಳ ಇಲಾಖೆಯಿಂದ 8 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ. 100–00ಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ನೀಡಲಾಗುತ್ತಿದೆ.